**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>**

**<u>ಸಿ.ಸಿ. ಸಂಖ್ಯೆಃ 721/2022</u>**

**<u>ಪಿರ್ಯಾದಿ</u>** : ರಾಜ್ಯ, ಪರವಾಗಿ ಕಳಸ ಪೊಲೀಸ್ ಠಾಣೆ,
ಕಳಸ.

**ವಿರುದ್ಧ**

**<u>ಆರೋಪಿ</u>** : ಅಬ್ದುಲ್ ಹಜೀಜ್ ಬಿನ್ ದಿಃ ಪಿ.ಜೆ.ಅಹ್ಮದ್ ಬಾವಾ,
ವಯಸ್ಸು ಸುಮಾರು 51 ವರ್ಷ,
ವಾಸಃ ಗೋರಿಮಕ್ಕಿ, ಕೆ.ಎಂ.ರಸ್ತೆ, ಕಳಸ.

**<u>ದೋಷಾರೋಪಣೆ</u>**

ಶ್ರೀ ವಿಶ್ವನಾಥ್ ಎ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆಗಳು ಏನೆಂದರೆ:-

1. ದಿನಾಂಕ 27.01.2022 ರಂದು ಬೆಳಗ್ಗೆ 9.30 ರ ಸಮಯದಲ್ಲಿ ಚಾಸಾ-1 ರವರು ಚಾಸಾ-5 ರವರಿಂದ ಕ್ರಯಕ್ಕೆ ಪಡೆದ ಅವರ ಸ್ವಾಧೀನಾನುಭವದಲ್ಲಿರುವ ಕೆಳಬೈಲಿನಲ್ಲಿರುವ ಸರ್ವೆ ನಂ.621/1 ರ ಜಮೀನಿನಲ್ಲಿ ಕೆಲಸ ಮಾಡುತ್ತಿರುವಾಗ ಆರೋಪಿಯಾದ ನೀವು ಏಕಾಏಕಿ ಸದರಿ ಜಮೀನಿಗೆ ಅತಿಕ್ರಮ ಪ್ರವೇಶ ಮಾಡಿರುತ್ತೀರಿ. ಈ ರೀತ್ಯಾ ಆರೋಪಿತರಾದ ನೀವು **ಭಾರತ ದಂಡ ಸಂಹಿತೆ ಕಲಂ 447** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

2. ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ಚಾಸಾ-1 ರವರಿಗೆ ಚಿನಾಲ್ಕಾ ಬಚ್ಚಾ ಎಂದು ಅವಾಚ್ಯವಾಗಿ ಬೈದಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು **ಭಾರತ ದಂಡ ಸಂಹಿತೆ ಕಲಂ 504** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

3. ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ಅಲ್ಲೇ ಬಿದ್ದಿದ್ದ 2 ದೊಣ್ಣೆಗಳನ್ನು ತೆಗೆದುಕೊಂಡು ಚಾಸಾ-1 ರವರ ಮೈ-ಕೈಗೆ ಹೊಡೆದು ಅವರ ಬಲಮೂಗಿನ ಬಳಿ ಸಾಮಾನ್ಯ ಸ್ವರೂಪದ ಗಾಯವನ್ನು ಉಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು **ಭಾರತ ದಂಡ ಸಂಹಿತೆ ಕಲಂ 324** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

4. ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ಕೈಯಲ್ಲಿ 2 ದೊಣ್ಣೆಗಳನ್ನು ಹಿಡಿದುಕೊಂಡು ಚಾಸಾ-1 ರವರಿಗೆ ನಿನ್ನನ್ನು ಸುಮ್ಮನೆ ಬಿಡುವುದಿಲ್ಲ ಕೊಲೆ ಮಾಡುತ್ತೇನೆಂದು ಬೆದರಿಕೆ ಹಾಕಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು **ಭಾರತ ದಂಡ ಸಂಹಿತೆ ಕಲಂ 506(2)** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ.

ಪ್ರಃ 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

*(ಆರೋಪಿತರಿಗೆ ದಿನಾಂಕ 06.06.2023 ರಂದು ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)*

**Sd/-**

ಮೂಡಿಗೆರೆ
ದಿನಾಂಕಃ 06.06.2023

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ.